ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	2176
ಸದಸ್ಯರ ಹೆಸರು	ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ	18.03.2022
ಉತ್ತರಿಸುವ ಸಚಿವರು	ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

******

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
ಅ)	ಇ-ಸ್ವತ್ತು ತಂತ್ರಾಂಶದ ದೋಷದ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರವಾದ ಮಾಹಿತಿ ನೀಡುವುದು)	ಬಂದಿದೆ. ಇ-ಸ್ವತ್ತು ತಂತ್ರಾಂಶಕ್ಕೆ ಸಂಬಂಧಪಟ್ಟಂತೆ, ಕೆಲವು ಬಾರಿ ಸರ್ವರ್ ಸಮಸ್ಯೆಗಳು ಉಂಟಾಗುತ್ತಿದ್ದವು. ಇ-ಸ್ವತ್ತು ತಂತ್ರಾಂಶಕ್ಕೆ ಪ್ರತ್ಯೇಕವಾಗಿ 2 ಸರ್ವರ್ ಗಳನ್ನು ನಿಗಧಿಪಡಿಸಿ, ಕರ್ನಾಟಕ ರಾಜ್ಯ ದತ್ತಾಂಶ ಕೇಂದ್ರ ದಲ್ಲಿ ನಿರ್ವಹಣೆ ಮಾಡಲಾಗುತ್ತಿದೆ. ಈ ಸಮಸ್ಯೆಗಳನ್ನು ಬಗೆಹರಿಸಲು ಕರ್ನಾಟಕ ರಾಜ್ಯ ದತ್ತಾಂಶ ಕೇಂದ್ರದಲ್ಲಿ ಇ-ಸ್ವತ್ತು ತಂತ್ರಾಂಶಕ್ಕೆ ಸಂಬಂಧಿಸಿದ 2 ಸರ್ವರ್ಗಳ Storage ಅನ್ನು ದುಪ್ಪಟ್ಟುಗೊಳಿಸಿ, ಸರ್ವರ್ ಗಳ Storage ಅನ್ನು ಹೆಚ್ಚಿಸಲಾಗಿದೆ.
ಆ)	ಇ-ಸ್ವತ್ತು ತಂತ್ರಾಂಶವನ್ನು ಖಾಸಗಿ ಸಂಸ್ಥೆಗೆ ನೀಡಲಾಗಿದೆಯೇ? ಹಾಗಿದ್ದಲ್ಲಿ, ನಿರ್ವಹಣೆ ಮಾಡುತ್ತಿರುವ ಸಂಸ್ಥೆಯ ವಿವರಗಳನ್ನು ನೀಡುವುದು)	ಇ-ಸ್ವತ್ತು ತಂತ್ರಾಂಶವನ್ನು ಅಭಿವೃದ್ಧಿ ಮತ್ತು ನಿರ್ವಹಣೆಗಾಗಿ ಯಾವುದೇ ಖಾಸಗಿ ಸಂಸ್ಥೆಗೆ ನೀಡಲಾಗಿಲ್ಲ. ಇ-ಸ್ವತ್ತು ತಂತ್ರಾಂಶವನ್ನು ಅಭಿವೃದ್ಧಿ ಮತ್ತು ನಿರ್ವಹಣೆಗಾಗಿ ಎನ್.ಐ.ಸಿ ರವರಿಗೆ ಜವಾಬ್ದಾರಿ ವಹಿಸಲಾಗಿದೆ.

ಸಂ: ಗ್ರಾಅಪ/33/ಇ-ಆಡಳಿತ/2022

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು.